ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 18-03-2021 ಪ್ರಶ್ನೆ ಸಂಖ್ಯೆ : 1377(1564)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಸ್. ರವಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 18-03-2021

ಉತ್ತರಿಸುವ ಸಚಿವರು: ಮಾನ್ಯ ಮುಖ್ಯಮಂತ್ರಿಗಳು

ವಿಷಯ : GST ಬಗ್ಗೆ

(ಅ) ಪ್ರಸ್ತುತ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಬರಬೇಕಾಗಿರುವ GST ಪರಿಹಾರ ಮೊತ್ತವೆಷ್ಟು;

(ಆ) ಸರಕು ಮತ್ತು ಸೇವಾ ತೆರಿಗೆ (GST) ನಷ್ಟ ಪರಿಹಾರದ ಅಲಭ್ಯತೆಯಿಂದಾಗಿ ಉಂಟಾಗಿರುವ ಆದಾಯ ಕೊರತೆ ಎಷ್ಟು;

(ಇ) GST ಸೆಸ್ ಹಾಗೂ ವಿಶೇಷ ರೂಪದ ಸಾಲ ಪಡೆಯುವ ಬಗ್ಗೆ ಸರ್ಕಾರ ಯಾವ ವಿಧಾನವನ್ನು ಆಯ್ಕೆ ಮಾಡಿಕೊಂಡಿದೆ; ಇದರಲ್ಲಿ ಎಷ್ಟು ಸಾಲ ಪಡೆಯುವ ಉದ್ದೇಶ ಹೊಂದಿದೆ; ಇದಕ್ಕೆ ಪಾವತಿಸಬೇಕಾದ ಬಡ್ಡಿದರ ಎಷ್ಟು; ಇದರಿಂದ ಬಂದ ಹಣವನ್ನು ಸರ್ಕಾರ ಯಾವ ಉದ್ದೇಶಕ್ಕೆ ಬಳಸಿಕೊಳ್ಳಲು ತೀರ್ಮಾನಿಸಲಾಗಿದೆ ಹಾಗೂ ಇದರಿಂದ ಆಗುವ ಅನುಕೂಲಗಳೇನು;

(ಈ) ಸಾಲ ಪಡೆದಲ್ಲಿ ಈ ಸಾಲದ ಮೇಲಿನ ಬಡ್ಡಿಯನ್ನು ಸರ್ಕಾರ ತನ್ನ ಯಾವ ಸಂಪನ್ಮೂಲದಿಂದ ಪಾವತಿಸಬೇಕಾಗುತ್ತದೆ ತಿಳಿಸುವುದು;

(ಉ) ರಾಜ್ಯ ಸರ್ಕಾರದ ಋಣಭಾರ ಎಷ್ಟು ಲಕ್ಷ ಕೋಟಿಗೆ ಏರಿಕೆಯಾಗಲಿದೆ? ಹಾಗೂ ಈಗ ಹಾಲಿ ಇರುವ ಋಣಭಾರ ಎಷ್ಟು?